## ಕ್ಷೇತ್ರ ಶಿಕ್ಷಣಾಧಿಕಾರಿಯವರ ಕಛೇರಿ, ಮಂಗಳೂರು ನಗರ ವಲಯ,ಬಲ್ಮಠ, ಮಂಗಳೂರು.

ಆ.ಸಂ.ಇ4/2009/ನೊಂದಣಿ/2011-12 ದಿನಾಂಕ: 31/01/2012.

ಫಾರಂ ನಂ.11

ನಿಯಮ (5)(ಇ) ನಿಯಮ 3

ಸರ್ಟಿಫಿಕೇಟು ನಂ. 47/2011-12 ದಿನಾಂಕ :- 28/01/2012

| | |
|---|---|
| ಸಂಚಾಲಕರು | ಹೆಚ್.ಆರ್.ಎಜ್ಯುಕೇಶನ್ ಫೌಂಡೇಶನ್ (ರಿ) ಶಾಮ ರೆಸಿಡೆನ್ಸಿ ವಾಸ್‌ಲೇನ್ ಮಂಗಳೂರು -2 |
| ಇದರ ಗವರ್ನಿಂಗ್ ಕೌನ್ಸಿಲನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ ನಂ:1-1995) ಸೆಕ್ಷನ್ ರಂತೆ ಈ ದಿನ ದಿನಾಂಕ:-28/01/2012 ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ. | |
| 1. ಕ್ರಮ ಸಂಖ್ಯೆ | 47/2011-12 ದಿನಾಂಕ:-28/01/2012 |
| 2. ಪ್ರಾಥಮಿಕ ಶಾಲೆಯ ಹೆಸರು | ಪ್ರೆಸ್ಟೀಜ್ ಪೂರ್ವ ಪ್ರಾಥಮಿಕ ಶಾಲೆ ಬಿಕ್ಕರ್ನಕಟ್ಟೆ ಕುಲಶೇಖರ ಮಂಗಳೂರು |
| 3. ಯಾವ ವರ್ಗದವರು ನಡೆಸುವ ಶಾಲೆ | ಅಲ್ಪಾ ಸಂಖ್ಯಾತರು |
| 4. ಅನುಮತಿ ನೀಡಿದ ಮಾಧ್ಯಮ | ಕನ್ನಡ ಮಾಧ್ಯಮ |
| 5. ಶುಲ್ಕ ಪಾವತಿ ಮಾಡಿರುವುದು. | 662342 ದಿನಾಂಕ :- 19/03/2010 |
| ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ: 47/2011-12 ಪುಟ ಸಂಖ್ಯೆ 103 ರಿಂದ 104 ಸಂಪುಟ ಸಂಖ್ಯೆ ಒಂದರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ನೊಂದಣಿ ವಹಿಯಲ್ಲಿ (ಪೂ.ಪ್ರಾ)ನೊಂದಾಯಿಸಲಾಗಿದೆ. | |



ಕ್ಷೇತ್ರ ಶಿಕ್ಷಣಾಧಿಕಾರಿ
ಮಂಗಳೂರು ನಗರ ವಲಯ
ಮಂಗಳೂರು

ಈ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ.

1. ಈ ನೊಂದಣೀಯ ನಿಯಮ ೩(೫)(4)ಕ್ಕೆ ಒಳಪಟ್ಟಿರುತ್ತದೆ.
2. ಗವರ್ನಿಂಗ್ ಕೌನ್ಸಲಿಂಗ್ ಇವರು 4(4)ರಲ್ಲಿತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪೂರೈಸಬೇಕು.
೩. ಶಾಲಾ ನಿವೇಶನ,ವಿಸ್ತೀರ್ಣ,ಕಟ್ಟಡ,ಪಾಠಪೀಠೋಪಕರಣಗಳು ಸಿಬ್ಬಂದಿ ವರ್ಗ,ಆರ್ಥಿಕ ಅನುಕೂಲತೆಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
4. ಸದರಿ ಶಿಕ್ಷಣ ಸಂಸ್ಥೆಯ ಯಾವುದೇ ಸಂದರ್ಭದಲ್ಲಿಯೂ ಇಲಾಖೆಯ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ತರಗತಿ ತೆರೆಯುವಂತಿಲ್ಲ.
೫. ಶಾಲೆಯುನ್ನು ಮಂಜೂರು ಮಾಡಿರುವ ಮಾಧ್ಯಮ ಹಾಗೂ ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು.
6. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯು ಅದೇ ಸ್ಥಳದಲ್ಲಿಯೇ ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
7. ಇಲಾಖೆಯು ನೀಡುವ ನಿರ್ದೇಶನ/ಆದೇಶಗಳನ್ನು ಪಾಲಿಸುವುದು ಕರ್ನಾಟಕ ಮಸೂದೆ 19೮3(ಕರ್ನಾಟಕ ಆಕ್ಟ್ ನಂ 1/199೫ ಇದರಡಿಯಲ್ಲಿ ಬರುವ ಎಲ್ಲಾ ಕಾಯ್ದೆಗಳನ್ನು ಹಾಗೂ ರಚಿಸಲಾಗಿರುವ ನಿಯಮಾವಳಿಗಳನ್ನು ತಪ್ಪದೇ ಪಾಲಿಸುವುದು ಮತ್ತು ಸರ್ಕಾರಿ ಅಧಿಸೂಚನೆ ನಂ;ಇಡಿ/17೫/ಪಿಎಂಎಸ್/9೫ ದಿನಾಂಕಕ 7/9/9೮ ಮತ್ತು ದಿ.29/12/9೮ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ.
೮. ಪ್ರತಿ ವರ್ಷಾರಂಭ ಮತ್ತು ಅಂತ್ಯದಲ್ಲಿ ಮಕ್ಕಳ ಹಾಜರಾತಿ/ದಾಖಲಾತಿ ವರದಿಯನ್ನು ಇಲಾಖೆಗೆ ಸಲ್ಲಿಸುವುದು.
9. ನೊಂದಣಿ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಅದನ್ನು ಹಿಂದಕ್ಕೆ ಪಡೆಯುವ ಅಧಿಕಾರವನ್ನು ಇಲಾಖೆ ಕಾದಿರಿಸಿಕೊಂಡಿದೆ.
10.ಪೂ.ಪ್ರಾ.ಶಿಕ್ಷಣದಲ್ಲಿ ತರಬೇತಾದ ಶಿಕ್ಷಕರನ್ನು ನೇಮಿಸಿಕೊಳ್ಳುವುದು ಹಾಗೂ ಈ ಹುದ್ದೆಗೆ ನಿಗದಿ ಪಡಿಸಿದ ವೇತನವನ್ನು ನೀಡುವುದು.

ಕ್ಷೇತ್ರ ಶಿಕ್ಷಣಾಧಿಕಾರಿ,
ಮಂಗಳೂರು ನಗರವಲಯ.

ಸಂಚಾಲಕರು,
ಹೆಚ್.ಆರ್.ಎಜ್ಯುಕೇಶನ್ ಫೌಂಡೇಶನ್
(ರಿ) ಶಾಮ ರೆಸಿಡೆನ್ಸಿ ವಾಸ್‌ಲೇನ್ ಮಂಗಳೂರು

Dpc3/B4/Registration aided school

ದ.ಕ. ಜಿಲ್ಲಾ ಪಂಚಾಯತ್ ಸಾರ್ವಜನಿಕ ಶಿಕ್ಷಣ ಉಪನಿರ್ದೇಶಕರ ಕಛೇರಿ (ಆಡಳಿತ), ಮಂಗಳೂರು

ನಮೂನೆ - 2

(ನಿಯಮ 30 ರ ಉಪನಿಯಮ 5 (ಬಿ))

ಪ್ರಮಾಣ ಪತ್ರ ಸಂಖ್ಯೆ:ಡಿ4/2252/ಶಿ.ಪ್ರಾ.ಶಾ.ಅ/04/07-08 ದಿನಾಂಕ: 25.4.2008.

ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1-1995) ಸೆಕ್ಷನ್ 31 ರಂತೆ ಹೆಚ್.ಆರ್. ಎಜುಕೇಶನಲ್ ಫೌಂಡೇಶನ್ ಟ್ರಸ್ಟ್, ಶಮ ರೆಸಿಡೆನ್ಸಿ, ವಾಸ್ ಲೇನ್, ಮಂಗಳೂರು ಇವರ ಗವರ್ನಿಂಗ್ ಕೌನ್ಸಿಲ್ ಗೆ ಸಂಬಂಧಿಸಿದ ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ಈ ದಿನ ದಿನಾಂಕ 25 ನೇ ಏಪ್ರಿಲ್ 2008 ರಂದು ನೋಂದಾಯಿಸಲಾಗಿದೆಯೆಂದು ಪ್ರಮಾಣೀಕರಿಸಲಾಗಿದೆ.

| | |
|---|---|
| 1. ಕ್ರಮ ಸಂಖ್ಯೆ | : 05 |
| 2. ಶಾಲೆಯ ಹೆಸರು ಮತ್ತು ಪೂರ್ಣ ವಿಳಾಸ | : ಪ್ರೆಸ್ಟೇಜ್ ಕನ್ನಡ ಮಾಧ್ಯಮ ಕಿರಿಯ ಪ್ರಾಥಮಿಕ ಶಾಲೆ, ಜೆಪ್ಪು ಮಂಗಳೂರು ನಗರ, ದಕ್ಷಿಣ ಕನ್ನಡ ಜಿಲ್ಲೆ |
| 3. ಅನುಮತಿ ನೀಡಿದ ತರಗತಿಗಳು | : 1 ರಿಂದ 5 ನೇ ತರಗತಿ - ತಲಾ ಒಂದೊಂದು ವಿಭಾಗ - ಏಕ ಕಾಲದಲ್ಲಿ |
| 4. ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | : 2008-09 |
| 5. ಅನುಮತಿ ನೀಡಿದ ಮಾಧ್ಯಮ | : ಕನ್ನಡ |
| 6. ಶುಲ್ಕ ಪಾವತಿ ಮಾಡಿರುವುದು | : ಡಿಡಿ ಸಂಖ್ಯೆ 966277 ದಿನಾಂಕ 29.11.2007 ರೂ. 5000/- |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ 05 ಪುಟ ಸಂಖ್ಯೆ 63 ವಾಲ್ಯೂಂ ಸಂಖ್ಯೆ 01 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ.

ಈ ಪ್ರಮಾಣ ಪತ್ರವನ್ನು ಈ ಕೆಳಗಿನ ಷರತ್ತುಗಳಿಗೊಳಪಟ್ಟು ನೀಡಲಾಗಿದೆ.

1. ಈ ನೋಂದಾವಣೆಯು ನಿಯಮ 3 ರ (4) ಮತ್ತು (5) ಕ್ಕೆ ಒಳಪಟ್ಟಿರುತ್ತದೆ.
2. ಗವರ್ನಿಂಗ್ ಕೌನ್ಸಿಲ್ ರವರು ನಿಯಮ 4 (4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪಾಠೋಪಕರಣ / ಪೀಠೋಪಕರಣಗಳು, ಸಿಬ್ಬಂದಿ, ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
4. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೇ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
5. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಇದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
6. ಯಾವ ಆಡಳಿತ ಮಂಡಳಿಗೆ ಶಾಲೆಯನ್ನು ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ಶಾಲೆಯನ್ನು ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೇ ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.
7. ಸರ್ಕಾರಿ ಆದೇಶ ಸಂಖ್ಯೆ ಇಡಿ 28/ಪಿಜಿಸಿ/94 ದಿನಾಂಕ 29.4.1994 ರಂತೆ 1 ರಿಂದ 5 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲೇ ನಡೆಸಿ ಭಾಷಾ ನೀತಿ ಪಾಲಿಸುವುದು ಕಡ್ಡಾಯವಾಗಿದೆ. ಭಾಷಾ ನೀತಿಯ ಷರತ್ತಿಗೆ ಒಳಪಟ್ಟು ನೋಂದಾವಣೆಯಾಗಿರುವ ಶಾಲೆಗಳಲ್ಲಿ ಭಾಷಾ ನೀತಿಯನ್ನು ಉಲ್ಲಂಘಿಸಿರುವುದು ಸರ್ಕಾರದ / ಇಲಾಖೆಯ / ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಗಮನಕ್ಕೆ ಬಂದಲ್ಲಿ, ನಿಯಮಗಳನ್ವಯ ಸದರಿ ಶಾಲೆಗೆ ನೀಡಿರುವ ನೋಂದಣಿಯನ್ನು ರದ್ದುಪಡಿಸಲಾಗುವುದು.

8. ಪ್ರತೀ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
9. ಕರ್ನಾಟಕ ಸಮಗ್ರ ಶಿಕ್ಷಣ ಮಸೂದೆ 1983 ಕರ್ನಾಟಕ ಆಕ್ಟ್ 1995 ರಡಿಯಲ್ಲಿ ಬರುವ ಕಾಯ್ದೆಗಳನ್ನು ಹಾಗೂ ರಚಿಸಲಾದ ಮತ್ತು ಅನುಮೋದನೆಗೆ ರಚಿಸಲಾಗಿರುವ ನಿಯಮಗಳ ಸಂಬಂಧದಡಿಯಲ್ಲಿ ಮತ್ತು ಪ್ರಾಧಿಕಾರ ನೀಡುವ ಎಲ್ಲಾ ಷರತ್ತುಗಳನ್ನು ಹಾಗೂ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.
10. ಶಿಕ್ಷಣ ಸಂಸ್ಥೆಯವರು ನಡೆಸುತ್ತಿರುವ ಶಾಲೆಗಳಿಗೆ ಸಂಬಂಧಿಸಿದಂತೆ ನೋಂದಣಿಯಾಗಿರುವ ಶಾಲೆಗಳೆಲ್ಲವೂ ಸರ್ಕಾರದ ಅಧಿಸೂಚನೆಯಡಿ ಇಡಿ 175/ಪಿಎಂಸಿ 95 ದಿನಾಂಕ 7.9.1998 ಮತ್ತು ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 175 ಪಿಎಂಸಿ 97 ದಿನಾಂಕ 29.12.1998 ರಂತೆ ಶಾಶ್ವತ ಅನುದಾನ ರಹಿತ ಶಾಲೆಯೆಂಬುದಾಗಿ ಪರಿಗಣಿಸಿದೆ.
11. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು (ಶಿಸ್ತು ಮತ್ತು ನಿಯಂತ್ರಣ) ನಿಯಮ 1978 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
12. ಶಾಲೆಯು ಪ್ರಾರಂಭಿಸಿದ 2 ತಿಂಗಳ ಅವಧಿಯೊಳಗೆ ಪ್ರಥಮ ಮಾನ್ಯತೆಗೆ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಒಪ್ಪಿಸತಕ್ಕದ್ದು.
13. ಅನುಮತಿ ನೀಡಿದ ಪ್ರತಿಯೊಂದು ತರಗತಿಗಳಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.
14. ತರಬೇತಿ ಹೊಂದಿದ ಹಾಗೂ ಇಲಾಖಾ ನಿಯಮಗಳ ಪ್ರಕಾರ ನಿಗದಿತ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.
15. ಕರ್ನಾಟಕ ಶಿಕ್ಷಣ ಮಸೂದೆಯ ಅನುಚ್ಛೇದದ 6 ರಡಿಯಲ್ಲಿ ಉಪಬಂಧ 36 ರಿಂದ 39 ರಂತೆ ನೋಂದಣಿ ಮಾಡಿದ ಎಲ್ಲಾ ಶಾಲೆಗಳೂ ರೆಕಗ್ನೈಸೇಷನ್ ಹಾಗೂ ಪ್ರಾವಿಜನಲ್ ರೆಕಗ್ನೈಸೇಷನ್ ವ್ಯಾಪ್ತಿಗೆ ಬರಬಹುದು.
16. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ರಾಷ್ಟ್ರೀಕೃತ ಬ್ಯಾಂಕಿನಲ್ಲಿರಿಸತಕ್ಕದ್ದು.
17. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪಾಠೋಪಕರಣ / ಪೀಠೋಪಕರಣ / ಗ್ರಂಥಾಲಯದ ಪುಸ್ತಕಗಳನ್ನು / ಆಟದ ಮೈದಾನ / ಶಾಲಾ ಕಟ್ಟಡ ಮುಂತಾದ ಅಗತ್ಯ ಸೌಲಭ್ಯಗಳನ್ನು ಒಂದು ವರ್ಷದೊಳಗೆ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.
18. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಾವಣೆಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ 2 ತಿಂಗಳೊಳಗಾಗಿ ಉಪನಿರ್ದೇಶಕರಿಗೆ ತಪ್ಪದೇ ವರದಿ ಒಪ್ಪಿಸತಕ್ಕದ್ದು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತನ್ನು ಪಾಲಿಸದಿದ್ದಲ್ಲಿ, ಈ ಆದೇಶ ರದ್ದಾಗುವುದು.
19. ಶಾಲಾ ಶಿಕ್ಷಕ ಸಿಬ್ಬಂದಿಗಳ ಸೇವಾ ಪುಸ್ತಕ ನಿಯಮಾನುಸಾರ ನಿರ್ವಹಿಸುವುದು.
20. ದಿನಾಂಕ 12.1.2006 ರ ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 104 ಎಸ್.ಇ.ಪಿ.2005 ರಲ್ಲಿ ವಿಧಿಸಿರುವ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸುವುದು.

ಸಹಿ/- 24/4/08

ಉಪನಿರ್ದೇಶಕರು (ಆಡಳಿತ)
ಪ್ರಾ.ಶಿ. ಇಲಾಖೆ, ದ.ಕ., ಮಂಗಳೂರು.

ಹೆಚ್.ಆರ್. ಎಜುಕೇಶನಲ್ ಫೌಂಡೇಶನ್ ಟ್ರಸ್ಟ್, ಗ್ರೌಂಡ್ ಫ್ಲೋರ್,
ಶಮ ರೆಸಿಡೆನ್ಸಿ, ವಾಸ್ ಲೇನ್, ಮಂಗಳೂರು - 2 - ಇವರಿಗೆ.

ಪ್ರತಿ: 1. ಮಾನ್ಯ ನಿರ್ದೇಶಕರು (ಪ್ರಾ.ಶಿ), ಸಾ.ಶಿ. ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು - ಇವರಿಗೆ.
2. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಮಂಗಳೂರು ನಗರ ವಲಯ - ಇವರಿಗೆ ಮಾಹಿತಿಗಾಗಿ.

ಕರ್ನಾಟಕ ಸರಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:ಸಿ7[6]ಪ್ರಾ.ಶಿಅ:ನೋಂದಣಿ/19/2011-12 ದಿನಾಂಕ: 04-08-2011

ನಮೂನೆ-2

(ನಿಯಮ 3 ಉಪನಿಯಮ 5 (ಬಿ)

ಪ್ರಮಾಣ ಪತ್ರ ಸಂಖ್ಯೆ 198/2011-12

ಹೆಚ್.ಆರ್.ಎಜುಕೇಶನಲ್ ಫೌಂಡೇಶನ್ [ರಿ] ಇವರಿಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆ್ಯಕ್ಟ್ 1995) ಸೆಕ್ಷನ್ 31ರಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ :ಇಡಿ 44 ಪಿ ಜಿ ಸಿ 2002, ದಿನಾಂಕ : 11.06.2002 ರ ಪ್ರಕಾರ ಈ ಕೆಳಗೆ ಸಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ 198 ಪುಟ ಸಂಖ್ಯೆ : 86 ವಾಲ್ಯೂಂ ಸಂಖ್ಯೆ :14 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. ಕ್ರಮ ಸಂಖ್ಯೆ | : | 179/2011-12 |
| 2. ಶಾಲೆಯ ಹೆಸರು ಮತ್ತು ವಿಳಾಸ | : | ಪ್ರೆಸ್ಟೀಜ್ ಕಿರಿಯ ಪ್ರಾಥಮಿಕ ಶಾಲೆ<br>ಜಪ್ಪಿನಮೊಗರು, ಮಂಗಳೂರು ದಕ್ಷಿಣ ಕನ್ನಡ ಜಿಲ್ಲೆ |
| 3. ಅನುಮತಿ ನೀಡಿದ ತರಗತಿ | : | 6ನೇ ತರಗತಿ, 7ನೇತರಗತಿ( ಶಾಶ್ವತ ಅನುದಾನ ರಹಿತವಾಗಿ) |
| 4. ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | : | *2011-12, 2012-13*(Permanently without-aid) |
| 5. ಅನುಮತಿ ನೀಡಿದ ಮಾಧ್ಯಮ | : | ಆಂಗ್ಲ ಮಾಧ್ಯಮ |
| 6. ಶುಲ್ಕ ಪಾವತಿ ಮಾಡಿರುವುದು | : | ರೂ. 10,000/-<br>(ಬ್ಯಾಂಕ್ ಹುಂಡಿಸಂಖ್ಯೆ :627455 ದಿನಾಂಕ : 08.03.2011). |

ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ. ಇದರಲ್ಲಿ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ( ನೋಂದಣಿ) ಅನುಮತಿಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1. ಈ ನೋಂದಾವಣೆಯು ಕರ್ನಾಟಕ ಶಿಕ್ಷಣ ಸಂಸ್ಥೆಗಳು( ಖಾಸಗಿ ಶಿಕ್ಷಣ ಸಂಸ್ಥೆಗಳ ನಿಯಂತ್ರಣ, ವರ್ಗೀಕರಣ ) ನಿಯಮ-1997 ನಿಯಮ- 3(5) (ಡಿ)ನಲ್ಲಿ ಸೂಚಿಸಿರುವ ಅಂಶಗಳಿಗೆ ಒಳಪಟ್ಟಿರುತ್ತದೆ.
2. ಇತ್ಯಾದಿ) ನಿಯಮಾವಳಿಗಳು 1995ರ ನಿಯಮ 4, 5, 6 ಮತ್ತು 8 ರನ್ವಯ ಸುರಕ್ಷತಾ ಕ್ರಮವಾಗಿ, ಶಾಲಾ ಕಟ್ಟಡವು ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಮೇಲ್ಛಾವಣಿಯನ್ನು ಹೊಂದಿದ್ದು, ಉತ್ತಮ ಗಾಳಿ ಬೆಳಕಿಗೆ ಅವಕಾಶವಿರಬೇಕು. ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳನ್ನು ಒದಗಿಸಬೇಕು. ಕುಡಿಯುವ ನೀರನ್ನು ಒದಗಿಸಿರಬೇಕು. ಶಾಲಾ ಆವರಣದಲ್ಲಿರುವ ಅಪಾಯಕಾರಿ ಸ್ಥಳಗಳಿಗೆ ಬೇಲಿ ಹಾಕಿ, ಶಾಲಾ ಆವರಣಕ್ಕೆ ಮಕ್ಕಳ ಸುರಕ್ಷತೆಗಾಗಿ ಕಂಪೌಂಡನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು, ಮತ್ತು ಬೆಂಕಿ ಆಕಸ್ಮಿಕಗಳನ್ನು ತಪ್ಪಿಸಲು ಅಗತ್ಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು.
3. ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್- 41(5) ರಂತೆ ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
5. ಯಾವ ಆಡಳಿತ ಮಂಡಳಿಗೆ ಶಾಲೆನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.
6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿದ ಎಲ್ಲಾ ಸರ್ಕಾರ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ1983 ( ಕರ್ನಾಟಕ ಆ್ಯಕ್ಟ್ ಸಂಖ್ಯೆ 1:95) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
7. ಈ ಪ್ರಾಥಮಿಕ ಶಾಲಾ ನೋಂದಾವಣೆಯು ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 175 ಪಿ.ಎಂ.ಸಿ, 95, ದಿನಾಂಕ : 07-09-98 ಮತ್ತು ದಿನಾಂಕ : 29-12-98ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ( )
8. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ( ಶಿಸ್ತು ಮತ್ತು ನಿಯಂತ್ರಣ) ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು/ಅವುಗಳಿಗೆ ಬದ್ಧವಾಗಿರತಕ್ಕದ್ದು.
9. ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತು ನಿಗದೀಕರಣ ಇತ್ಯಾದಿ) ನಿಯಮಾವಳಿ 1995 ರನ್ವಯ ಇಲಾಖೆ ಮತ್ತು ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕಗಳನ್ನು ಮಾತ್ರ ಭೋಧಿಸತಕ್ಕದ್ದು ಹಾಗೂ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಹೊರೆಯಾಗದಂತೆ ಕ್ರಮವಹಿಸುವುದು.

10. ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ವಸ್ತು ನಿಗಧೀಕರಣ ಇತ್ಯಾದಿ) ನಿಯಮಾವಳಿ ೧೯೯೫ ದಿನಾಂಕ 04-10-96ರ ನಿಯಮ–10 ರಂತೆ ಟರ್ಮ್ ಶುಲ್ಕ, ಭೋಧನಾ ಶುಲ್ಕ, ವಿಶೇಷ ಅಭಿವೃದ್ಧಿ ಶುಲ್ಕಗಳನ್ನು ಮಾತ್ರ ವಸೂಲಿ ಮಾಡತಕ್ಕದ್ದು ಹಾಗೂ ನಿಯಮ 10(04)ರಂತೆ ಶಾಲೆಯಲ್ಲಿ ವಿದ್ಯಾರ್ಥಿ/ ಪೋಷಕರಿಂದ ವಸೂಲಿ ಮಾಡುವ ಶುಲ್ಕಗಳ ವಿವರಗಳ ಒಂದು ಬ್ರೋಚರ್ ಅನ್ನು ಶಾಲೆಯ ಸೂಚನಾ ಫಲಕದಲ್ಲಿ ಕಡ್ಡಾಯವಾಗಿ ಪ್ರಕಟಿಸಿ, ಅದರ ಒಂದು ಪ್ರತಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ/ ಉಪನಿರ್ದೇಶಕರಿಗೆ ಸಲ್ಲಿಸತಕ್ಕದ್ದು.
11. ಸರ್ಕಾರದ ಅಧಿಸೂಚನೆ ಸಂಖ್ಯೆ : ಇಡಿ.39. ವಿವಿಧ–99, ದಿನಾಂಕ : 14.03.2000 ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ರೆಗ್ಯೂಲೇಷನ್ ಆಫ್ ಸರ್‌ಟನ್ ಫೀಸ್ ಅಂಡ್ ಡೊನೇಶನ್) ನಿಯಮ–1999ರ ನಿಯಮಗಳನ್ನು, ಕಡ್ಡಾಯವಾಗಿ ಪಾಲಿಸತಕ್ಕದ್ದು ಹಾಗೂ ಈ ನಿಯಮದಂತೆ ವಂತಿಗೆಯನ್ನು ವಸೂಲು ಮಾಡುವಂತಿಲ್ಲ.
12. ಅನುಮತಿ ಪಡೆದ 2 ತಿಂಗಳೊಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 ( ಆ್ಯಕ್ಟ್ 1 ಆಫ್ 1995) ಪ್ರಕಾರ ಸೆಕ್ಷನ್ 36 ರಿಂದ 39 ರ ರೀತ್ಯಾ ಹಾಗೂ ಇಡಿ ೧೩೧ ವಿವಿಧ ೯೮, ಬೆಂಗಳೂರು, ದಿನಾಂಕ : 04.11.99 ರಂತೆ ಮಾನ್ಯತೆ ನವೀಕರಣ ಹೊಂದಲು ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 137 ವಿವಿಧ 98, ಬೆಂಗಳೂರು, ದಿನಾಂಕ : 19-05-99ರ ಪ್ರಕಾರ ಸಕ್ಷಮ ಪ್ರಾಧಿಕಾರಿಗಳಿಗೆ ಅರ್ಜಿ ಸಲ್ಲಿಸತಕ್ಕದ್ದು ಹಾಗೂ ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ನಿಗಧಿತ ಭದ್ರತಾ ಠೇವಣಿಯನ್ನು ಜಿಲ್ಲಾ ಉಪ ನಿರ್ದೇಶಕರ ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.
13. ಸರ್ಕಾರದ ಅಧಿಸೂಚನೆ ಸಂಖ್ಯೆ : ಇಡಿ.52ವಿವಿದ.99 ದಿನಾಂಕ:–02-02-2000ರ ಅನೆಕ್ಸರ್–5ರ ನಿಯಮದಂತೆ ಅನುಮತಿನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ಪಾಲಿಸತಕ್ಕದ್ದು.
14. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.
15. ಕರ್ನಾಟಕ ಶಿಕ್ಷಣ ಮಸೂದೆಯ ನಿಯಮಗಳಂತೆ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ, ಆಟದ ಮೈದಾನ ಶಾಲಾ ಕಟ್ಟಡಗಳನ್ನು ಮೂರು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು.
16. ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.
17. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತನ್ನಿಂದ ತಾನೇ ರದ್ದಾಗುವುದು.
18. 7ನೇ ತರಗತಿಯನ್ನು ಸ್ವಾಭಾವಿಕ ಬೆಳವಣಿಗೆ ಆಧಾರದ ಮೇಲೆ ಪ್ರಾರಂಭಿಸತಕ್ಕದ್ದು.
19. ಈಗಾಗಲೇ 1 ರಿಂದ 7ನೇ ತರಗತಿ ಕನ್ನಡ ಮಾಧ್ಯಮ ಇದ್ದಲ್ಲಿ, ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಮಂಜೂರಾತಿಯಿಂದ ಕನ್ನಡ ಮಾಧ್ಯಮದ ತರಗತಿಗಳಿಗೆ ಯಾವುದೇ ರೀತಿ ಧಕ್ಕೆ ಬಾರದಂತೆ ನೋಡಿಕೊಳ್ಳುವುದು.
20. ಸರ್ಕಾರದ ಸುತ್ತೋಲೆ ಸಂಖ್ಯೆ ಇಡಿ 27 ಎಸ್‌ಇಪಿ 03 ದಿನಾಂಕ 13.02.2003 ರ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ, ಶಾಲೆಯಲ್ಲಿ ನೇಮಕಗೊಂಡಿರುವ ಸಿಬ್ಬಂದಿಗಳ ಸೇವಾ ಪುಸ್ತಕವನ್ನು ತೆರೆದು, ಅದರಲ್ಲಿ ಶಿಕ್ಷಕರ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲು ಮಾಡಿ ಕಡ್ಡಾಯವಾಗಿ ನಿರ್ವಹಿಸುವುದು.
21. ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ತಪ್ಪದೇ ನಿಯೋಜಿಸುವುದು.
22. ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೋಂದಣಿಯನ್ನು ರದ್ದುಪಡಿಸಲಾಗುವುದು.
23. ಪ್ರತಿ ತರಗತಿಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ 50 ಕ್ಕೆ ಮೀರಬಾರದು.
24. ಅನುಮತಿ ನೀಡಿದ 5 ವರ್ಷಗಳವರೆಗೆ ಶಾಲಾ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.
25. ಸರ್ಕಾರದ ಪತ್ರದ ಸಂಖ್ಯೆ :ಇಡಿ:122;ಎಸ್.ಇ.ಎಸ್.2007 ಬೆಂಗಳೂರು ದಿನಾಂಕ : 17.05.2007ರ ಪತ್ರದಲ್ಲಿನ ಷರತ್ತುಗಳನ್ನು ಪೂರೈಸತಕ್ಕದ್ದು.
26. 1 ರಿಂದ 5 ನೇ ತರಗತಿವರೆಗಿನ ಯಾವ ಮಾಧ್ಯಮದಲ್ಲಿ ನೋಂದಣಿ ನೀಡಲಾಗಿದೆಯೋ ಅದೇ ಮಾಧ್ಯಮದಲ್ಲಿ ಶಾಲೆಯನ್ನು ಶಾಲೆಯನ್ನು ನಡೆಸತಕ್ಕದ್ದು.

[ತುಷಾರ್. ಗಿರಿ ನಾಥ್]
ಆಯುಕ್ತರು

ಸ್ಥಳ: ಬೆಂಗಳೂರು
ದಿನಾಂಕ: 04-08-2011.

ಪ್ರತಿಯನ್ನು.
1. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ,
   **ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ**
2. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, **ಮಂಗಳೂರು** ನಗರ, ದಕ್ಷಿಣ ಕನ್ನಡ ಜಿಲ್ಲೆ
3. ಕಾರ್ಯದರ್ಶಿಗಳು, **ಹೆಚ್.ಆರ್. ಎಜುಕೇಷನಲ್ ಫೌಂಡೇಶನ್** [ರಿ] ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ
4. ಕಛೇರಿ ಪ್ರತಿ.

\\3-server\typing3\ D\Babu\6-7 permission [Prestige].doc.

Regpost

# ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:ಸಿ8[8]ಪ್ರೌ.ಶಾಶಿ:ಹೊ.ಪ್ರೌ.ಶಾ:163:2011-12 ದಿನಾಂಕ: 17.04.2012

## ನಮೂನೆ-2

[ನಿಯಮ 3 ಉಪನಿಯಮ 5(ಬಿ)]

## ಪ್ರಮಾಣ ಪತ್ರ ಸಂಖ್ಯೆ:104/2012-13

**ಎಚ್.ಆರ್.ಎಜುಕೇಷನ್ ಫೌಂಡೇಶಷನ್[ರಿ], ಶಮಾ ರೆಸಿಡೆನ್ಸಿ, ಗ್ರೌಂಡ್ ಫ್ಲೋರ್, ವಾಸ್‌ಲೇನ್, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ,** ಇವರ ಗವರ್ನಿಗ್ ಕೌನ್ಸಿಲ್‌ನ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರೌಢಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸೆಕ್ಷನ್-31ರಂತೆ **2012-13ನೇ** ಸಾಲಿನಿಂದ ಹೊಸ ಪ್ರೌಢಶಾಲೆ ಪ್ರಾರಂಭಿಸಲು ಮಂಜೂರಾತಿ ನೀಡಿ ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | | |
|---|---|---|---|
| 01 | ಕ್ರಮ ಸಂಖ್ಯೆ | : | 104/2012-13 |
| 02. | ಶಾಲೆಯ ಹೆಸರು ಮತ್ತು ವಿಳಾಸ | : | **ಪ್ರೆಸ್ಟೀಜ್ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಜೆಪ್ಪಿನ ಮೊಗರು, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ.** |
| 03. | ಅನುಮತಿ ನೀಡಿದ ತರಗತಿ | : | **8ನೇ ತರಗತಿ, 9ನೇ ತರಗತಿ, 10ನೇ ತರಗತಿ.** |
| 04. | ಪ್ರಾರಂಭಿಸಬೇಕಾದ ತರಗತಿಗಳು | : | **8ನೇ ತರಗತಿ, 9ನೇ ತರಗತಿ, 10ನೇ ತರಗತಿ.** |
| 05. | ಶೈಕ್ಷಣಿಕ ವರ್ಷ | : | 2012-13 2013-14 2014-15 |
| 06. | ಅನುಮತಿ ನೀಡಿದ ಮಾಧ್ಯಮ | : | **ಆಂಗ್ಲ ಮಾಧ್ಯಮ [ಶಾಶ್ವತ ಅನುದಾನರಹಿತ]** |
| 07. | ಶುಲ್ಕ ಪಾವತಿ ಮಾಡಿರುವುದು | : | **D.D. No:605780, Date:26.09.2011, Rs. 10,000/-** |

ಸದರಿ ಶಿಕ್ಷಣ ಸಂಸ್ಥೆಯನ್ನು **ಕ್ರಮ ಸಂ:104/2012-13, ಪುಟ ಸಂ:150, ವಾಲ್ಯೂಂ ಸಂ:09ರಲ್ಲಿ** ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೊಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

01. ಈ ನೊಂದಾವಣಿಯ ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
02. ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
03. ಶಾಲಾ ನಿವೇಶನ, ಸಂಸ್ಥೆಯ ಹೆಸರಿನಲ್ಲಿರಬೇಕು, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
04. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
05. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
06. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
07. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆಕ್ಟ್ ಸಂಖ್ಯೆ:1:96] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
08. ಈ ಪ್ರೌಢಶಾಲಾ ನೊಂದಾವಣಿಯಂತೆ ಸರ್ಕಾರಿ ಅಧಿಸೂಚನೆ ಸಂ:ಇಡಿ:175:ಪಿಎಂಸಿ:95, ದಿ:07.09.1998 ಮತ್ತು ದಿ:29.12.1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು

ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10/- ಛಾಪಾ ಕಾಗದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

09. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು] ನಿಯಮ 1999ರ ನಿಯಮಗಳನ್ವಯ ಸರ್ಕಾರದ ಅಧಿಸೂಚನೆ ದಿನಾಂಕ:27.12.2007ರ ಸೂಚನೆಯನ್ನು ಕಡ್ಡಾಯವಾಗಿ ಪಾಲಿಸುವುದು.

10. ಇಲಾಖೆ ಹಾಗೂ ಸರ್ಕಾರ ನಿಗಧಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

11. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಇರತಕ್ಕದ್ದು. ಪ್ರತಿ ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.

12. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

13. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36-39ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

14. ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

15. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪ ನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

16. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು, ಇಲ್ಲದಿದ್ದಲ್ಲಿ ನೊಂದಣಿಯನ್ನು ರದ್ದುಗೊಳಿಸಲಾಗುವುದು.

17. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

18. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

19. ಪ್ರಥಮ ಮಾನ್ಯತೆಗಾಗಿ ಉಪನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವುದು, ಉಪನಿರ್ದೇಶಕರು ಶಿಕ್ಷಣ ಕಾಯ್ದೆ ಮತ್ತು ಸಕಾರದ ಆದೇಶ ದಿನಾಂಕ:03.09.2007ರ ಅನುಬಂಧ-3ರ ಚೆಕ್‌ಲಿಸ್ಟ್‌ನಲ್ಲಿ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು, ನಿಗಧಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೊಂದಣಿ ತಂತಾನೆ ರದ್ದಾಗುತ್ತದೆ.

20. ಶಾಲೆಯ ಕಟ್ಟಡ ಸುರಕ್ಷತೆ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯುತ್ ಅಪಘಾತ ಮುಂತಾದ ಅವಗಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.

21. ಶಾಲಾ ಕಟ್ಟಡವನ್ನು ನೊಂದಣಿ ಮಾಡಿಸುವ ಷರತ್ತಿಗೊಳಪಟ್ಟಿರುತ್ತದೆ.

[ತುಷಾರ್ ಗಿರಿ ನಾಥ್]
ಆಯುಕ್ತರು ಹಾಗೂ ನೋಂದಣಿ ಅಧಿಕಾರಿ

DHL

**ಇವರಿಗೆ:**

01. ಜಿಲ್ಲಾ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ.
02. ಕಾರ್ಯದರ್ಶಿಗಳು, ಎಚ್.ಆರ್.ಎಜುಕೇಷನ್ ಫೌಂಡೇಶಷನ್[ರಿ], ಶಮಾ ರೆಸಿಡೆನ್ಸಿ, ಗ್ರೌಂಡ್ ಫ್ಲೋರ್, ವಾಸ್‌ಲೇನ್, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ.
03. ಕಛೇರಿ ಪ್ರತಿ.